ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಪ್ರಧಾನಮಂತ್ರಿಯವರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 26/12/2019

### ಅಟಲ್ ಜಲ ಯೋಜನೆ ಉದ್ಘಾಟಿಸಿದ ಪಿಎಂ ಮೋದಿ

# ಅಂತರ್ಜಲ ಕಾಪಾಡಲು ಕರೆ



ವಾಜಪೇಯಿ ಸ್ಮಾರಕದ ಬಳಿ ಆಡ್ವಾಣಿ ಜತೆ ಪ್ರಧಾನಿ ಮೋದಿ ಕುಶಲೋಪರಿ.

**ನವದೆಹಲಿ:** "ದೇಶದ ಅಂತರ್ಜಲ ಮಟ್ಟ ಕಾಪಾಡುವಲ್ಲಿ ರೈತರೂ ಕೈ ಜೋಡಿಸಬೇಕು. ಕಡಿಮೆ ನೀರು ಬೇಡುವ ಕೃಷಿಪದ್ಧತಿಗಳನ್ನು ಹಾಗೂ ಕಡಿಮೆ ನೀರಿನಲ್ಲಿ ಹೆಚ್ಚು ಇಳುವರಿ ನೀಡುವಂಥ ಬೆಳೆಗಳನ್ನು ಬೆಳೆಯಬೇಕು ಎಂದು ದೇಶದ ರೈತರಿಗೆ ಪ್ರಧಾನಿ ಮೋದಿ ಕರೆ ನೀಡಿದ್ದಾರೆ.

ಮಾಜಿ ಪ್ರಧಾನಿ ಅಟಲ್ ಅವರ 95ನೇ ಹುಟ್ಟುಹಬ್ಬದ ಪ್ರಯುಕ್ತ ಸರ್ಕಾರ ಜಾರಿಗೊಳಿಸಿದ ಅಟಲ್ ಜಲ ಯೋಜನೆಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ಅಂತರ್ಜಲ ಪ್ರಮಾಣ ಗಣನೀಯವಾಗಿ ಕುಸಿದಿರುವ ಕರ್ನಾಟಕ ಸೇರಿ 7 ರಾಜ್ಯಗಳ ಸುಮಾರು 8,300 ಹಳ್ಳಿಗಳಲ್ಲಿ ಈ ಯೋಜನೆ ಜಾರಿಗೊಳಿಸಲಾಗಿದೆ.

"ರೈತರು ತಮ್ಮಲ್ಲಿನ ಪುರಾತನ ಕೃಷಿ ಪದ್ಧತಿ ಕೈಬಿಟ್ಟು, ಹೊಸ ವೈಜ್ಞಾನಿಕ ಪದ್ಧತಿ ಅಳವಡಿಸಿಕೊಳ್ಳಬೇಕು. ಕಬ್ಬನ್ನು ಬೆಳೆವ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚು ಕುಸಿದಿರುವುದು ಬೆಳಕಿಗೆ ಬಂದಿದೆ. ಹೀಗಾಗಿ, ಕಬ್ಬು ಬೆಳೆಯುವ ರೈತರು ಮಳೆ ಕೊಯ್ಲು, ಸೂಕ್ಷ್ಮ ಬೇಸಾಯ ಪದ್ಧತಿ ಅಳವಡಿಸಿಕೊಳ್ಳಬೇಕು. ಕಬ್ಬಿನ ಬದಲು ಇತರ ಲಾಭದಾಯಕ ವಾಣಿಜ್ಯ ಬೆಳೆ ಆಯ್ಕೆ ಮಾಡಿದರೆ ಉತ್ತಮ" ಎಂದರು. ಇದೇ ವೇಳೆ, "ನೀರಿನ ಸಂಪರ್ಕವಿಲ್ಲದ 18 ಕೋಟಿ ಮನೆಗಳಲ್ಲಿ 3 ಕೋಟಿ ಮನೆಗಳಿಗಷ್ಟೇ 70 ವರ್ಷಗಳಲ್ಲಿ ನೀರಿನ ಸಂಪರ್ಕ ನೀಡಲಾಗಿತ್ತು. ಜಲ ಜೀವನ ಮಿಷನ್ ಮೂಲಕ 15 ಕೋಟಿ ಮನೆಗಳಿಗೆ ನೀರಿನ ಸಂಪರ್ಕ ನೀಡುವ ಗುರಿ ಹೊಂದಲಾಗಿದೆ" ಎಂದರು.